# ಕರ್ನಾಟಕ ಸರ್ಕಾರ

ಸಂಖ್ಯೆ: ಆಕುಕ 421 ಅಮುಕಾ 2020

ಕರ್ನಾಟಕ ಸರ್ಕಾರದ ಸಚಿವಾಲಯ
ವಿಕಾಸ ಸೌಧ
ಬೆಂಗಳೂರು, ದಿನಾಂಕ: 21.11.2020

## ಸುತ್ತೋಲೆ

ವಿಷಯ :ಕೋವಿಡ್ ಸೋಂಕಿತರ ಒಳರೋಗಿ ಚಿಕಿತ್ಸೆಗಾಗಿ ಬೆಡ್‌ಗಳ ಮರುಹಂಚಿಕೆ

ಉಲ್ಲೇಖ: ಅಧಿಸೂಚನೆ ಸಂಖ್ಯೆ: ಆಕುಕ 228 ಎಸಿಎಸ್ 2020 ದಿನಾಂಕ: 23.06.2020

*****

1. ದಿನಾಂಕ:23.06.2020ರಂದು ಹೊರಡಿಸಿರುವ ಅಧಿಸೂಚನೆ ಮೇರೆಗೆ ಕೋವಿಡ್-19 ಸಾಂಕ್ರಾಮಿಕದ ಹರಡುವಿಕೆಯಿಂದ ಬಳಲುತ್ತಿರುವ ಹೆಚ್ಚಿನ ಸಂಖ್ಯೆಯ ಜನರಿಗೆ ಚಿಕಿತ್ಸೆಯ ಅವಶ್ಯಕತೆಯನ್ನು ಗುರುತಿಸಿದ್ದು, ಈ ಸಂದರ್ಭದಲ್ಲಿ ಚಿಕಿತ್ಸೆಯನ್ನು ಮುಖ್ಯವಾಗಿ ಸಾರ್ವಜನಿಕ ಆರೋಗ್ಯ ಸಂಸ್ಥೆ (ಪಿಹೆಚ್‌ಐ) ಹೊರಡಿಸಲಾಗಿದ್ದು, ಉಲ್ಬಣಿಸಿದ ಸಾಂಕ್ರಾಮಿಕ ಖಾಯಿಲೆಯನ್ನು ಗಮನದಲ್ಲಿಟ್ಟುಕೊಂಡು ಖಾಸಗಿ ಆಸ್ಪತ್ರೆಗಳು, ನರ್ಸಿಂಗ್ ಹೋಮ್ಸ್ ಇತ್ಯಾದಿಗಳನ್ನು (ಖಾಸಗಿ ಆರೋಗ್ಯ ಸೇವೆ ನೀಡುವವರು) ಕೆಪಿಎಂಇ ಕಾಯ್ದೆಯಡಿ ನೊಂದಾಯಿತಗೊಂಡ ಆಸ್ಪತ್ರೆಗಳನ್ನು ರೋಗಿಗಳಿಗೆ ಚಿಕಿತ್ಸೆ ನೀಡಲು ಅನುಮತಿಸಲಾಗಿತ್ತು. ಮುಂದುವರೆದು, ವಿಪತ್ತು ನಿರ್ವಹಣಾ ಕಾಯ್ದೆಯಡಿಯಲ್ಲಿ ಖಾಸಗಿ ಆಸ್ಪತ್ರೆಗಳ ಹಾಸಿಗೆ ಸಂಖ್ಯೆಯನ್ನು ಹಂಚಲು ಮತ್ತು ಸರ್ಕಾರದಿಂದ ರೆಫರಲ್ ಮಾಡಿದ ರೋಗಿಗಳ ಚಿಕಿತ್ಸೆಗಾಗಿ ಖಾಸಗಿ ಆರೋಗ್ಯ ಸೇವೆ ನೀಡುವವರು ವಿಧಿಸಬಹುದಾದ ಚಿಕಿತ್ಸಾ ದರಗಳನ್ನು ನಿಯಂತ್ರಿಸಲು ಅಧಿಸೂಚನೆ ಹೊರಡಿಸಲಾಗಿತ್ತು.

2. ಅದರಂತೆ ಕೋವಿಡ್-19 ರೋಗಿಗಳಿಗೆ ಚಿಕಿತ್ಸೆ ನೀಡಲು ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್‌ನಡಿಯಲ್ಲಿ ನೋಂದಾಯಿತಗೊಂಡ ಆಸ್ಪತ್ರೆಗಳಲ್ಲಿನ ಶೇ.50ರಷ್ಟು ಹಾಸಿಗೆಗಳನ್ನು ಸಾರ್ವಜನಿಕ ಆರೋಗ್ಯ ಪ್ರಾಧಿಕಾರಿಗಳು ರೆಫರಲ್ ಮಾಡುವ ರೋಗಿಗಳಿಗೆ ಚಿಕಿತ್ಸೆ ನೀಡಲು ಕಾಯ್ದಿರಿಸುವ ಬಗ್ಗೆ ಸೂಚಿಸಲಾಗಿತ್ತು. ಸರ್ಕಾರದಿಂದ ಗುರುತಿಸಲಾಗುವ ರೋಗಿಗಳಿಗೆ ಬಿಬಿಎಂಪಿ ವಲಯದ ಬೆಂಗಳೂರು ನಗರ ಮತ್ತು ಗ್ರಾಮಾಂತರ ಜಿಲ್ಲೆಗಳಿಗೆ ಆಯುಕ್ತರು, ಬಿಬಿಎಂಪಿ ಮತ್ತು ಇತರೆ ಜಿಲ್ಲೆಗಳಿಗೆ ಸಂಬಂಧಿಸಿದಂತೆ ಆಯಾ ಜಿಲ್ಲಾಧಿಕಾರಿಗಳಿಂದ ಹಾಸಿಗೆ ಹಂಚಿಕೆ ಮಾಡುವ ಬಗ್ಗೆ ಸೂಚಿಸಲಾಗಿತ್ತು.

3. ಇತ್ತೀಚಿನ ದಿನಗಳಲ್ಲಿ ಕೋವಿಡ್-19 ನಿಯಂತ್ರಣ ಹಾಗೂ ಸಮರ್ಪಕವಾದ ಚಿಕಿತ್ಸೆಯಿಂದ ಕೋವಿಡ್-19 ಸೋಂಕಿತರ ಸಂಖ್ಯೆಯಲ್ಲಿ ಹಾಗೂ ಸಾವಿನ ಪ್ರಮಾಣದಲ್ಲಿ ಇಳಿಮುಖವಾಗುತ್ತಿದೆ. ಚಿಕಿತ್ಸೆಯ ಪೂರ್ವಾನುಮತಿಗಾಗಿ ಸಲ್ಲಿಸಿದ ವಿವರಗಳನ್ನು ಗಮನದಲ್ಲಿರಿಸಿ ಸರ್ಕಾರಿ ಆಸ್ಪತ್ರೆಗಳಲ್ಲಿ ಶೇ.22ರಷ್ಟು ಹಾಸಿಗೆಗಳು ಭರ್ತಿಯಾಗಿದ್ದು, ಇನ್ನುಳಿದಂತೆ ಶೇ.78ರಷ್ಟು ಹಾಸಿಗೆಗಳು ಖಾಲಿಯಿರುವುದು ಕಂಡು ಬಂದಿದೆ. ಆದಕಾರಣ, ಸರ್ಕಾರಿ ಆಸ್ಪತ್ರೆಗಳಲ್ಲಿ ಕೋವಿಡ್-19 ಚಿಕಿತ್ಸೆಗಾಗಿ ನಿಗದಿಪಡಿಸಿರುವ ಡಿಸಿಹೆಚ್‌ಸಿ ಹಾಗೂ ಡಿಹೆಚ್‌ಸಿಗಳಲ್ಲಿನ ಚಿಕಿತ್ಸೆ ಸೌಲಭ್ಯದ ಹಾಸಿಗೆಗಳು ಭರ್ತಿಯಾಗುವವರೆಗೆ ಅಲ್ಲಿಯೇ ಚಿಕಿತ್ಸಾ ವ್ಯವಸ್ಥೆ ಮಾಡಬೇಕಾಗಿದ್ದು, ಹೆಚ್ಚುವರಿ ಸೋಂಕಿತರಿದ್ದಲ್ಲಿ ತದನಂತರ ಖಾಸಗಿ ಆಸ್ಪತ್ರೆಗಳಿಗೆ ರೆಫರಲ್ ಆಧಾರದ ಮೇಲೆ ಭರ್ತಿ ಮಾಡಲು ಸೂಕ್ತವಿರುತ್ತದೆ. ಆದ್ದರಿಂದ ಇನ್ನು ಮುಂದೆ ಈ ಕೆಳಗೆ ವಿವರಿಸಿರುವ ಅಂಶಗಳನ್ನು ಗಮನದಲ್ಲಿಟ್ಟುಕೊಂಡು ಬೆಡ್‌ಗಳ ಹಂಚಿಕೆ ಮಾಡಲು ಕ್ರಮ ಕೈಗೊಳ್ಳುವುದು:

1. ಜನರಲ್ ಬೆಡ್ ಮತ್ತು ಹೆಚ್‌ಡಿಯು ಬೆಡ್‌ಗಳನ್ನು ಸರ್ಕಾರಿ ಮತ್ತು ಸರ್ಕಾರಿ ವೈದ್ಯಕೀಯ ಕಾಲೇಜುಗಳಲ್ಲಿ ಮಾತ್ರ ಹಂಚಿಕೆಗೆ ಸೀಮಿತ ಇಡುವುದು. ಸದರಿ ಸಂಸ್ಥೆಗಳಲ್ಲಿ ಶೇ.90ರಷ್ಟು ಬೆಡ್‌ಗಳು ಭರ್ತಿಯಾದ ನಂತರ ಖಾಸಗಿ ಆಸ್ಪತ್ರೆಗಳಿಗೆ ರೋಗಿಗಳನ್ನು ಕಳುಹಿಸುವುದು.

2. ತೀವ್ರತರವಾದ ಸೋಂಕಿದ್ದು ಹೆಚ್ಚಿನ ಪರಿಣಾಮಕಾರಿ ಚಿಕಿತ್ಸೆ ಅವಶ್ಯವಿದ್ದಲ್ಲಿ ಖಾಸಗಿ ಆಸ್ಪತ್ರೆಗಳ ಹಾಸಿಗೆ ವ್ಯವಸ್ಥೆ ಬಳಸಿಕೊಳ್ಳಬಹುದಾಗಿದೆ.
3. ತುರ್ತು ಸಂದರ್ಭಗಳಲ್ಲಿ ತೀವ್ರತರವಾದ ಸೋಂಕಿತ ರೋಗಿಗಳ ಚಿಕಿತ್ಸೆಗಾಗಿ ಅವಶ್ಯಕತೆಗನುಗುಣವಾಗಿ ಖಾಸಗಿ ಆಸ್ಪತ್ರೆಯ ಐಸಿಯು ಹಾಗೂ ವೆಂಟಿಲೇಟರ್ ಸೌಲಭ್ಯಗಳಗಾಗಿ ಹಾಸಿಗೆ ಹಂಚಿಕೆ ಮಾಡಬಹುದು.

4. ಮುಂಬರುವ ದಿನಗಳಲ್ಲಿ ಒಂದು ವೇಳೆ ಸೋಂಕು ಉಲ್ಬಣಿಸಿದಲ್ಲಿ, 5 ದಿನಗಳ ತಿಳುವಳಿಕೆ ಸಮಯದಲ್ಲಿ ಪುನ: ಖಾಸಗಿ ಆಸ್ಪತ್ರೆಗಳಲ್ಲಿ ಚಿಕಿತ್ಸಾ ವ್ಯವಸ್ಥೆಗಾಗಿ ಹಾಸಿಗೆಗಳನ್ನು ಈಗಾಗಲೇ ಗುರುತಿಸಲಾಗಿರುವ ಬೆಂಗಳೂರು ನಗರದಲ್ಲಿ ಕೇಂದ್ರಿಕೃತ ಹಾಸಿಗೆ ಹಂಚಿಕೆ ವ್ಯವಸ್ಥೆಯನ್ನು ಬಳಸಿಕೊಂಡು ಚಿಕಿತ್ಸಾ ವ್ಯವಸ್ಥೆ ಕಲ್ಪಿಸಲಾಗುವುದು ಮತ್ತು ರಾಜ್ಯದ ಇತರೆ ಜಿಲ್ಲೆಗಳಲ್ಲಿ ಜಿಲ್ಲಾ ಆರೋಗ್ಯ ಪ್ರಾಧಿಕಾರಿಗಳ ರೆಫರಲ್ ಆಧಾರದ ಮೇಲೆ ಚಿಕಿತ್ಸಾ ಕ್ರಮ ಕೈಗೊಳ್ಳಲಾಗುವುದು.

5. ಈ ಷರತ್ತುಗಳನ್ನೊಳಗೊಂಡಂತೆ ತಾತ್ಕಾಲಿಕವಾಗಿ ಖಾಸಗಿ ಆಸ್ಪತ್ರೆಗಳಲ್ಲಿ ಹಂಚಿಕೆಯಾಗುತ್ತಿದ್ದ ಹಾಸಿಗೆ ವ್ಯವಸ್ಥೆಯನ್ನು ಜನರಲ್ ಮತ್ತು ಹೆಚ್‌ಡಿಯು ಬೆಡ್‌ಗಳ ಹಂಚಿಕೆ ವ್ಯವಸ್ಥೆಯನ್ನು ಮಾರ್ಪಾಡು ಮಾಡಲಾಗಿದೆ. ಈ ಹಾಸಿಗೆ ಸೌಲಭ್ಯಗಳನ್ನು ಮುಂದಿನ ಆದೇಶದವರೆಗೆ ಖಾಸಗಿ ಆಸ್ಪತ್ರೆಗಳು ಚಿಕಿತ್ಸಾ ವ್ಯವಸ್ಥೆಗಾಗಿ ಬಳಸಿಕೊಳ್ಳಬಹುದಾಗಿದೆ. ಈ ವ್ಯವಸ್ಥೆಯನ್ನು ಆಗಿಂದ್ದಾಗಿಯೇ ಪರಿಶೀಲಿಸಿ ಸೋಂಕು ಹರಡುವಿಕೆಯ ತೀವ್ರತೆಯ ಆಧಾರದ ಮೇಲೆ ಮರುಪರಿಶೀಲಿಸಲಾಗುವುದು.

(ಜಾವೇದ್ ಅಖ್ತರ್)
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ
ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಇಲಾಖೆ

ಇವರಿಗೆ:

1. ಸರ್ಕಾರದ ಪ್ರಧಾನ ಕಾರ್ಯದರ್ಶಿ, ವೈದ್ಯಕೀಯ ಶಿಕ್ಷಣ ಇಲಾಖೆ
2. ಆಯುಕ್ತರು, ಬಿಬಿಎಂಪಿ / ವಿಶೇಷ ಆಯುಕ್ತರು, ಬಿಬಿಎಂಪಿ
3. ಕಾರ್ಯಕಾರಿ ನಿರ್ದೇಶಕರು, ಸುವರ್ಣ ಆರೋಗ್ಯ ಸುರಕ್ಷಾ ಟ್ರಸ್ಟ್
4. ಆಯುಕ್ತರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು
5. ಅಭಿಯಾನ ನಿರ್ದೇಶಕರು, ರಾಷ್ಟ್ರೀಯ ಆರೋಗ್ಯ ಅಭಿಯಾನ
6. ಎಲ್ಲಾ ಜಿಲ್ಲಾಧಿಕಾರಿಗಳು / ಎಲ್ಲಾ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು.
7. ನಿರ್ದೇಶಕರು, ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಸೇವೆಗಳು
8. ನಿರ್ದೇಶಕರು – ವೈದ್ಯಕೀಯ ಶಿಕ್ಷಣ
9. ಎಲ್ಲಾ ಜಿಲ್ಲಾ ಆರೋಗ್ಯಾಧಿಕಾರಿಗಳು ಎಲ್ಲಾ ಜಿಲ್ಲಾ ಸರ್ಜನ್‌ಗಳು ಹಾಗೂ ಜಿಲ್ಲಾ ಸರ್ವೇಕ್ಷಣಾಧಿಕಾರಿಗಳು

ಪ್ರತಿಯನ್ನು ಮಾಹಿತಿಗಾಗಿ ಕಳುಹಿಸಿದೆ.

1. ಮಾನ್ಯ ಆರೋಗ್ಯ ಮತ್ತು ಕುಟುಂಬ ಕಲ್ಯಾಣ ಹಾಗೂ ವೈದ್ಯಕೀಯ ಶಿಕ್ಷಣ ಸಚಿವರ ಆಪ್ತ ಕಾರ್ಯದರ್ಶಿಗಳು,
2. ಮುಖ್ಯ ಕಾರ್ಯದರ್ಶಿಯವರ ಆಪ್ತ ಕಾರ್ಯದರ್ಶಿಗಳು, ಕರ್ನಾಟಕ ಸರ್ಕಾರ